# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 11-06-2021 ರಂದು ನಡೆದ ವಾರ್ಡ್ ಡಿಟರ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ಎ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ವಸುಂದರಾ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು,· ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ.ದವಲ್, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ),
2. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
3. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
7. ಶ್ರೀಮತಿ ಗೀತಾ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
8. ಶ್ರೀಮತಿ ರಾಜಶ್ರೀ, ಕಲ್ಯಾಣ ಇಲಾಖೆ,
9. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿನ ರಾಮ ದೇವಸ್ಥಾನ ರಸ್ತೆಯಲ್ಲಿ ಸರಗಳ್ಳತನ, ಯದ್ವಾ ತದ್ವ ವಾಹನ ಚಾಲನೆ ಮಾಡುವುದು ಸಾಮಾನ್ಯವಾಗಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಗಮನ ಹರಿಸಿ, ದೈನಂದಿನ ಪೊಲೀಸ್ ಗಸ್ತನ್ನು ತೀವ್ರಗೊಳಿಸಲು ಸಭೆಯಲ್ಲಿ ಹಾಜರಿದ್ದ, ಕಾನೂನು ಸುವ್ಯವಸ್ಥೆ, ಸಹಾಯಕ ಸಬ್‌ಇನ್ಸ್‌ಪೆಕ್ಟರ್ ರವರಿಗೆ ಸಭೆಯು ಸರ್ವಾನುಮತದಿಂದ ತೀರ್ಮಾನಿಸಿ, ಕ್ರಮ ವಹಿಸಲು ಆದೇಶಿಸಿತು.

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆಯಲ್ಲಿ ಬೀದಿ ದೀಪಗಳು ಉರಿಯದೇ ದುರಸ್ತಿಯಲ್ಲಿರುತ್ತವೆ ಮತ್ತು ಸೇಂಟ್ ಚಾರ್ಲ್ಸ್ ಶಾಲೆ ಹತ್ತಿರ ಟೈಮರ್‌ಗಳು ದುರಸ್ತಿಯಾಗಿ ದಿನವೆಲ್ಲಾ ವಿದ್ಯುತ್ ಬೀದಿ ದೀಪಗಳು ಉರಿಯುತ್ತಿರುತ್ತವೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಬೀದಿ ದೀಪಗಳ ವಿಭಾಗದ ಅಧಿಕಾರಿಗಳು ಗೈರು ಹಾಜರಾಗಿದ್ದುದರಿಂದ ಸಭೆಯಲ್ಲಿ ಹಾಜರಿದ್ದ ಗುತ್ತಿಗೆದಾರರಿಗೆ ಬೀದಿ ದೀಪಗಳನ್ನು ಕೂಡಲೇ ದುರಸ್ತಿ ಪಡಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ಕಾವೇರಿ ನೀರು ಸರಬರಾಜು ಕ್ರಮಬದ್ಧವಾಗಿ ಆಗುತ್ತಿದ್ದು, ಯಾವುದೇ ತೊಂದರೆ ಆಗುತ್ತಿರುವುದಿಲ್ಲ ಮತ್ತು ದೈನಂದಿನ ಕಸ ಸಂಗ್ರಹಣೆ, ಬೀದಿ ಗುಡಿಸಿ, ಸ್ವಚ್ಛಗೊಳಿಸುವ ಕಾರ್ಯವು ಸಮರ್ಪಕವಾಗಿ ಆಗುತ್ತಿದ್ದು, ಪ್ರಶಂಸಿಸಿರುತ್ತಾರೆ.

4) **ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,** ಹೆಚ್.ಬಿ.ಆರ್ ಬಡಾವಣೆಯಲ್ಲಿ ಖಾಲಿ ನಿವೇಶನಗಳು ಇರುವುದರಿಂದ ಸೊಳ್ಳೆಗಳ ಹಾವಳಿ ಹೆಚ್ಚಾಗಿರುತ್ತದೆ. ಆದ್ದರಿಂದ ಫಾಗಿಂಗ್ ಕಾರ್ಯವನ್ನು ಕೈಗೊಳ್ಳಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ, ಹಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ, ಕೂಡಲೇ ಹೆಚ್.ಬಿ.ಆರ್ ಬಡಾವಣೆ, 1ನೇ ಹಂತ, ಪ್ರದೇಶಕ್ಕೆ ಫಾಗಿಂಗ್ ಕಾರ್ಯವನ್ನು ಕೈಗೊಳ್ಳುವುದಾಗಿ ಸಭೆಗೆ ಭರವಸೆ ನೀಡಿದರು.

5) **ವೈದ್ಯಾಧಿಕಾರಿಗಳ ಕಛೇರಿಯ ಸಿಬ್ಬಂದಿಯಾದ ಡಾ॥ ವಸುಂದರಾ, ವಾರ್ಡ್ ಸಂಖ್ಯೆ.29 ರವರು ಮಾತನಾಡಿ, ಪ್ರಸ್ತುತ** ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್ 19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 1234 ಪ್ರಕರಣಗಳಲ್ಲಿ 68 ಪ್ರಕರಣಗಳು ಸಕ್ರಿಯವಾಗಿದ್ದು, ಈ ಪೈಕಿ 7 ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, 3 ಜನ ಮರಣ ಹೊಂದಿರುತ್ತಾರೆ. ಇದುವರೆವಿಗೂ ಆರ್.ಟಿ.ಪಿ.ಸಿ.ಆರ್ ಪರೀಕ್ಷೆಗೆಗೊಳಪಟ್ಟ ಪ್ರಕರಣಗಳು ಒಟ್ಟು 42038, ರ್ಯಾಪಿಡ್ ಪರೀಕ್ಷೆಗೆ ಒಳಪಟ್ಟ 7796, ವ್ಯಾಕ್ಸಿನೇಷನ್ ಸೆಂಟ್ರಲ್ 8720, ವ್ಯಾಕ್ಸಿನೇಷನ್ ಸ್ಟೇಟ್ 1146 ಜನರಿಗೆ ವ್ಯಾಕ್ಸಿನೇಷನ್ ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| [signature] | Prasanna Kumar A. |
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು | ಅಧ್ಯಕ್ಷರು |
| ಸಹಾಯಕ ಅಭಿಯಂತರರು | (ನೋಡೆಲ್ ಅಧಿಕಾರಿಗಳು) |
| ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.